ಕರ್ನಾಟಕ ವಿಧಾನಸಭೆ

ಶನಿವಾರ 5ನೇ ಫೆಬ್ರವರಿ 2005 ರಂದು

ಸದನವು ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ 9-43 ಗಂಟೆಗೆ ಸಮಾವೇಶಗೊಂಡಿತು

ಅಧ್ಯಕ್ಷರಾದ (ಶ್ರೀ ಕೃಷ್ಣ) ರವರು

ಅಧ್ಯಕ್ಷ ಪೀಠವನ್ನು ಅಲಂಕರಿಸಿದರು

1. ಶಾಸನ ರಚನೆ

(ಅ) ಕರ್ನಾಟಕ ಭೂ ಸುಧಾರಣೆಗಳ (ತಿದ್ದುಪಡಿ) ವಿಧೇಯಕ 2005

ಅಧ್ಯಕ್ಷರು : ಈಗ ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು. ಮೊದಲಿಗೆ ಕರ್ನಾಟಕ ಭೂ ಸುಧಾರಣೆಗಳ (ತಿದ್ದುಪಡಿ) ವಿಧೇಯಕ, 2005ನ್ನು ತೆಗೆದುಕೊಳ್ಳುತ್ತೇನೆ.

ಶ್ರೀ ಎಂ.ಪಿ. ಪ್ರಕಾಶ್ (ಕಂದಾಯ ಸಚಿವರು) :- ಸನ್ಮಾನ್ಯ ಅಧ್ಯಕ್ಷರೆ, ಕರ್ನಾಟಕ ಭೂ ಸುಧಾರಣೆಗಳ (ತಿದ್ದುಪಡಿ) ವಿಧೇಯಕಕ್ಕೆ ದಿನಾಂಕ 03.02.2005 ರಂದು ಈಗಾಗಲೇ ಇದೇ ಸದನದಲ್ಲಿ ಮಂಜೂರಾತಿಯಾಗಿತ್ತು. ಆದರೆ, ಆ ದಿವಸ ಭೂ ಸುಧಾರಣೆ ಮತ್ತು ಭೂ ಸ್ವಾಧೀನ ಈ ಎರಡೂ ಕಾಯಿದೆಗಳು ನಮ್ಮಲ್ಲಿ ಯಾದಿಯಲ್ಲಿತ್ತು. ಇದರಲ್ಲಿ ನಾವು ಸ್ವಲ್ಪ ಪರ್‌ಪಾಟ್ ಮಾಡಿಕೊಂಡು ಭೂ ಸುಧಾರಣೆ ಕಾಯಿದೆಯಲ್ಲಿರತಕ್ಕಂಥದ್ದನ್ನು ಅಂದರೆ, 1 $^{1}/_{4}$ (ಒಂದೂಕಾಲ್) ಎಕರೆ ಜಮೀನನ್ನು ಕೊಡತಕ್ಕಂಥ ಪರಮಾಧಿಕಾರವನ್ನು ಆಯಾಯ ಜಿಲ್ಲಾಧಿಕಾರಿಗಳಿಗೆ ಕೊಡಲಾಗಿತ್ತು. ಇದರಲ್ಲಿ ಬೆಂಗಳೂರು ಜಿಲ್ಲೆ ಮತ್ತು ಬೆಂಗಳೂರು ನಗರವನ್ನು ಹೊರತು ಪಡಿಸಲಾಗಿದೆ ಎಂದು ಮಾಡಿದ್ದೇವೆ. ಈಗಾಗಲೇ ಸದರಿ ವಿಧೇಯಕಕ್ಕೆ ಮಂಜೂರಾತಿ ಆಗಿದೆ. ಮತ್ತೆ ಉಳಿದಂತೆ ಭೂಸ್ವಾಧೀನ ಪ್ರಮಾಣದಲ್ಲಿ 15 ಪರ್ಸೆಂಟ್ ಬಡ್ಡಿ ಇರತಕ್ಕಂಥದ್ದನ್ನು 9 ಪರ್ಸೆಂಟ್ ಇಳಿಸಬೇಕೆಂದು ಮತ್ತು 9 ಪರ್ಸೆಂಟ್ ಇರತಕ್ಕಂಥ ಬಡ್ಡಿಯನ್ನು 6 ಪರ್ಸೆಂಟ್‌ಗೆ ಇಳಿಸುವಂತೆ ತಿದ್ದುಪಡಿ ಮಾಡಿರುವ ಬಗ್ಗೆ ಬಹಳ ಜನ ಹಿರಿಯರು ಹೇಳಿದ್ದರಿಂದ ಆ ಮಸೂದೆಯನ್ನು ನಾನು ವಾಪಸ್ಸು ತೆಗೆದುಕೊಳ್ಳುತ್ತಿದ್ದೇನೆ. ಆದ್ದರಿಂದ, ಇದರ ಬಗ್ಗೆ ಮತ್ತೆ ಚರ್ಚೆ ಮಾಡತಕ್ಕಂಥ ಅವಶ್ಯಕತೆ ಇಲ್ಲವೆಂದು ನಾನು ಭಾವಿಸಿದ್ದೇನೆ. ಏಕೆಂದರೆ, ಇದನ್ನು ಸರಿಪಡಿಸಲಾಗಿದೆ. ಆದ್ದರಿಂದ, ಸದರಿ ಬಿಲ್‌ನ್ನು ಪಾಸ್ ಮಾಡಿಕೊಡಬೇಕೆಂದು ಕೇಳಿಕೊಳ್ಳುತ್ತೇನೆ. ಆನಂತರ ಇದನ್ನು ಮೇಲ್ಮನೆಗೆ ಕಳುಹಿಸಿಕೊಡಬೇಕಾಗಿದೆ.

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಅಂಕೋಲ) :- ಸನ್ಮಾನ್ಯ ಅಧ್ಯಕ್ಷರೆ, ಮಾನ್ಯ ಕಂದಾಯ ಸಚಿವರಿಗೆ ನಾವು ಅಭಿನಂದನೆ ಸಲ್ಲಿಸುತ್ತೇವೆ. ಏಕೆಂದರೆ, ರೈತರಿಗೆ, ಅದರಲ್ಲಿಯೂ ಕೂಡ ನೊಂದ ಸಂತ್ರಸ್ತರಿಗೆ ಮತ್ತು ದೇಶಕ್ಕೆ ಅಥವಾ ಸಮಾಜಕ್ಕೆ ಬೇರೆ ಬೇರೆ ಕಾರಣಕ್ಕೋಸ್ಕರ ತ್ಯಾಗ ಮಾಡಿದಂತವರಿಗೆ ನಾವು ಕೊಡತಕ್ಕಂಥ ಪರಿಹಾರ ಧನದಲ್ಲಿರುವ ಬಡ್ಡಿ ದರವನ್ನು 15 ರಿಂದ 9 ಪರ್ಸೆಂಟ್‌ಗೆ ಮತ್ತು 9 ರಿಂದ 6 ಪರ್ಸೆಂಟ್‌ಗೆ ಇಳಿಸುವುದು ಉಚಿತವಲ್ಲವೆಂಬುದರ ಬಗ್ಗೆ ಪಕ್ಷಾತೀತವಾಗಿ ಇಲ್ಲಿ ಎಲ್ಲರ ಅಭಿಪ್ರಾಯ ಒಂದೇ ಇತ್ತು. ಇದನ್ನು ಸರ್ಕಾರ ಗೌರವಿಸಿ ವಾಪಸ್ಸು ತೆಗೆದುಕೊಂಡಿರುವುದಕ್ಕೆ ನಾನು ಅಭಿನಂದನೆ ಸಲ್ಲಿಸುತ್ತೇನೆ.

ಶ್ರೀ ಕೆ. ಜಯಪ್ರಕಾಶ್ ಹೆಗ್ಡೆ (ಬ್ರಹ್ಮಾವರ) :– ಸನ್ಮಾನ್ಯ ಅಧ್ಯಕ್ಷರೆ, ಹಿಂದೆ ಒಂದು ಪರಿಪಾಟವಾಗಿತ್ತು. ಅದೇನೆಂದರೆ, ಮಸೂದೆಯನ್ನು ವಾಪಸ್ಸು ತೆಗೆದುಕೊಳ್ಳುವುದಿಲ್ಲವೆಂಬ ಪ್ರತಿಷ್ಠೆ ಕೂಡ ಇತ್ತು. ಆದರೆ, ಇದಕ್ಕೆ ಪರ್ಯಾಯವಾಗಿ ಮಾನ್ಯ ಸಚಿವರು ಇದನ್ನು ವಾಪಸ್ಸು ಪಡೆಯುತ್ತಿರುವುದು ನಿಜವಾಗಿಯೂ ಕೂಡ ಸಂತೋಷದ ವಿಷಯ. ಆದಕಾರಣ ನಾನು ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ.

ಶ್ರೀ ಜಿ.ಸಿ. ಮಾಧುಸ್ವಾಮಿ (ಚಿಕ್ಕನಾಯಕನಹಳ್ಳಿ) : ಸನ್ಮಾನ್ಯ ಅಧ್ಯಕ್ಷರೆ, ಮಾನ್ಯ ಸಚಿವರು ಇದನ್ನು ವಾಪಸ್ಸು ತೆಗೆದುಕೊಂಡಿರುವುದಕ್ಕೆ ನಾನೂ ಕೂಡ ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ.

ಅಧ್ಯಕ್ಷರು :– ಪ್ರಸ್ತಾವ ಏನೆಂದರೆ,

"2005ನೇ ಸಾಲಿನ ಕರ್ನಾಟಕ ಭೂ ಸುಧಾರಣೆಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2

ಅಧ್ಯಕ್ಷರು :– ಪ್ರಸ್ತಾವ ಏನೆಂದರೆ, "ಖಂಡ 2 ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಸೇರಿದಂತೆ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು :– ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎಂ.ಪಿ. ಪ್ರಕಾಶ್ (ಕಂದಾಯ ಸಚಿವರು) :– ಮಾನ್ಯ ಅಧ್ಯಕ್ಷರೆ, "2005ನೇ ಸಾಲಿನ ಕರ್ನಾಟಕ ಭೂ ಸುಧಾರಣೆಗಳ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಅಧ್ಯಕ್ಷರು :– ಪ್ರಸ್ತಾವ ಏನೆಂದರೆ,

"2005ನೇ ಸಾಲಿನ ಕರ್ನಾಟಕ ಭೂ ಸುಧಾರಣೆಗಳ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು